# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1518

2) ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಬಸನ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ: : 18-03-2021

4) ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನೇ ದಿನೇ ಪಟ್ರೋಲ್ ಮತ್ತು ಡೀಸೆಲ್ ಬೆಲೆಗಳಲ್ಲಿ ಹೆಚ್ಚಳವಾಗಿ ಸಾಮಾನ್ಯ ಜನರಿಗೆ ಬಹಳ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಬೆಲೆ ಹೆಚ್ಚಳ ತಡೆಯಲು ಸರ್ಕಾರ ಏನಾದರೂ ಕ್ರಮಗಳನ್ನು ಕೈಗೊಂಡಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ಹೌದು<br><br>ಪೆಟ್ರೋಲ್ ಮತ್ತು ಡೀಸೆಲ್‌ಗಳ ಬೆಲೆಯು ಮಾರುಕಟ್ಟೆ ಆಧಾರಿತವಾಗಿದ್ದು, ಅವುಗಳ ಮಾರಾಟದ ಬೆಲೆಯಲ್ಲಿ ದಿನೇದಿನೇ ಬದಲಾವಣೆಗಳಾಗುತ್ತಿದೆ. ಮೂಲ ಬೆಲೆಯಲ್ಲಿ ಹೆಚ್ಚಳವಾದಾಗ ಅವುಗಳ ಮಾರಾಟದ ತೆರಿಗೆ ಹೆಚ್ಚಳವಾಗುತ್ತದೆ. ದಕ್ಷಿಣದ ರಾಜ್ಯಗಳಿಗೆ ಹೋಲಿಸಿದಾಗ ಕೇರಳ ರಾಜ್ಯ ಹೊರತುಪಡಿಸಿದರೆ ಪೆಟ್ರೋಲ್ ಬೆಲೆಯು ಕರ್ನಾಟಕದಲ್ಲಿಯೇ ಕಡಿಮೆ ಇರುತ್ತದೆ. ಡೀಸೆಲ್ ಬೆಲೆಯು ದಕ್ಷಿಣದ ಇತರ ರಾಜ್ಯಗಳಿಗಿಂತ ಕರ್ನಾಟಕದಲ್ಲಿಯೇ ಅತೀ ಕಡಿಮೆ ಇರುತ್ತದೆ. |
| ಆ) | ಪೆಟ್ರೋಲ್ ಮತ್ತು ಡೀಸೆಲ್‌ಗಳ ಮೇಲೆ ರಾಜ್ಯ ಸರ್ಕಾರ ಎಷ್ಟು ತೆರಿಗೆಯನ್ನು ವಿಧಿಸುತ್ತದೆ; (ವಿವರ ಒದಗಿಸುವುದು) | ಪೆಟ್ರೋಲ್ ಮತ್ತು ಡೀಸೆಲ್‌ಗಳ ಮೇಲಿನ ಪ್ರಸ್ತುತ ತೆರಿಗೆ ದರ:<br>ಪೆಟ್ರೋಲ್ : 35% (ರೂ.23.54 ಪೈಸೆ) ಪ್ರತಿ ಲೀಟರ್‌ಗೆ<br>ಡೀಸೆಲ್ : 24% (ರೂ.16.28 ಪೈಸೆ) ಪ್ರತಿ ಲೀಟರ್‌ಗೆ |
| ಇ) | ಸದರಿ ತೆರಿಗೆಯನ್ನು ಕಡಿಮೆ ಮಾಡಿ ಜನ ಸಾಮಾನ್ಯರಿಗೆ ಅನುಕೂಲ ಮಾಡಿಕೊಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ? (ಸರ್ಕಾರದ ಸ್ಪಷ್ಟ ನಿಲುವನ್ನು ತಿಳಿಸುವುದು) | ಇಂತಹ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ |

ಸಂಖ್ಯೆ: ಆಇ 35 ಸಿಎಸ್‌ಎಲ್ 2021

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ